ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ-296

**31 ಡಿಸೆಂಬರ್ 2022 * ಶನಿವಾರ * ಸಂಜೆ 6.00**

**ಸ್ಥಳ: ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು**

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ಷ.ಬ್ರ. ಶ್ರೀ ಬಸವಲಿಂಗ ಸ್ವಾಮಿಗಳು**

ಶ್ರೀ ಮಹಾಂತಸ್ವಾಮಿ ಮಠ, ದಂಡಿಕೆರೆ

**ಉಪನ್ಯಾಸ**

**ಡಾ. ಎಸ್. ಶಿವರಾಜಪ್ಪ**

ವಿಶ್ರಾಂತ ಪ್ರಾಧ್ಯಾಪಕರು, ಮೈಸೂರು

**ವಿಷಯ : ರಾಜೇಂದ್ರ ಶ್ರೀಗಳ ಸಾಮಾಜಿಕ ಕಳಕಳಿ**

**ವಚನ ಗಾಯನ**

**ಕು. ಎನ್. ಚೂಡಾಮಣಿ**

ಮೈಸೂರು

---

**ಪ್ರಾಯೋಜಕರು**

**ಶ್ರೀಮತಿ ಮಹದೇವಮ್ಮ**

ಗುರು ಸ್ವೀಟ್ ಮಾರ್ಟ್, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996 ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಷ.ಬ್ರ. ಶ್ರೀ ಬಸವಲಿಂಗ ಸ್ವಾಮಿಗಳು** ಮೈಸೂರು ತಾಲ್ಲೂಕು ದಂಡಿಕೆರೆ ಶ್ರೀ ಮಹಾಂತಸ್ವಾಮಿ ಮಠದ ಶ್ರೀ ಮಹಾಂತ ಸ್ವಾಮಿಗಳ ಕರಕಮಲಸಂಜಾತರು. 1995ರಲ್ಲಿ ಶ್ರೀಮಠದ ನೇತೃತ್ವವನ್ನು ವಹಿಸಿಕೊಂಡ ಶ್ರೀಗಳು ಭಕ್ತರ ಮನೆಗಳಿಗೆ ಪೂಜಾ ಕಾರ್ಯಗಳಿಗೆ ಹೋಗುವುದು, ಶ್ರೀಮಠದ ಗದ್ದುಗೆಗಳಿಗೆ ನಿತ್ಯಪೂಜೆ ಹಾಗೂ ಶಿವರಾತ್ರಿ, ದೀಪಾವಳಿ ಹಬ್ಬದ ದಿನಗಳಲ್ಲಿ ವಿಶೇಷ ಪೂಜೆಗಳನ್ನು ಏರ್ಪಡಿಸುತ್ತಾ ಬಂದಿದ್ದಾರೆ.

**ಪ್ರೊ. ಎಸ್. ಶಿವರಾಜಪ್ಪನವರು** ಮೈಸೂರು ಮಹಾರಾಜ ಕಾಲೇಜಿನಲ್ಲಿ ಸಂಸ್ಕೃತ ಪ್ರಾಧ್ಯಾಪಕರಾಗಿ ಹಾಗೂ ಗಾಂಧಿ ಭವನ ಮತ್ತು ವಿಶ್ವವಿದ್ಯಾನಿಲಯದ ಪ್ರಾಚ್ಯವಿದ್ಯಾ ಸಂಶೋಧನಾಲಯದ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಮೂರು ದಶಕಗಳಿಗೂ ಹೆಚ್ಚು ಕಾಲ ಬೋಧನಾನುಭವ ಹೊಂದಿರುವರು. 60ಕ್ಕೂ ಹೆಚ್ಚು ಕೃತಿಗಳನ್ನು ಮತ್ತು 40ಕ್ಕೂ ಹೆಚ್ಚು ಸಂಪಾದಿತ ಕೃತಿಗಳನ್ನು ಹೊರತಂದಿದ್ದಾರೆ. ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವಿಚಾರ ಸಂಕಿರಣಗಳಲ್ಲಿ ಪ್ರಬಂಧ ಮಂಡಿಸಿದ್ದಾರೆ. ಹಲವು ಸಂಶೋಧನಾ ವಿದ್ಯಾರ್ಥಿಗಳಿಗೆ ಪಿಎಚ್.ಡಿ ಮಾರ್ಗದರ್ಶನ ಮಾಡಿದ್ದಾರೆ. ಪ್ರಸ್ತುತ ಮೈಸೂರಿನ ಶ್ರೀ ನಟರಾಜ ಶಿಕ್ಷಣ ಸಂಸ್ಥೆಗಳ ವಿಶೇಷಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

**ಶ್ರೀಮತಿ ಮಹದೇವಮ್ಮನವರು** ಗುರುಲಿಂಗಜಂಗಮ ಪ್ರಿಯರು. ಗುರು ಸ್ವೀಟ್ ಮಾರ್ಟ್ ಮಾಲೀಕರಾಗಿದ್ದ ಶ್ರೀಮತಿ ಕೆಂಪನಂಜಮ್ಮ ಮತ್ತು ಶ್ರೀ ಬಸವಣ್ಣನವರ ಸುಪುತ್ರಿ. ಪತಿ ಲಿಂಗೈಕ್ಯ ಶ್ರೀ ಸಂಗರಾಜುರವರು. ಮಗಳು ಡಾ. ಎಸ್. ಮಮತರವರು ಜೆಎಸ್ಎಸ್ ಆಸ್ಪತ್ರೆಯಲ್ಲಿ ವೈದ್ಯರಾಗಿದ್ದಾರೆ ಹಾಗೂ ಮೂವರು ಗಂಡು ಮಕ್ಕಳಾದ ಶ್ರೀ ಎಸ್. ಕುಮಾರ್, ಶ್ರೀ ಎಸ್. ನಟರಾಜ್, ಶ್ರೀ ಎಸ್. ಶಿವನಾಂದ್ ಇವರುಗಳು ವ್ಯಾಪಾರೋದ್ಯಮದಲ್ಲಿ ತೊಡಗಿಸಿಕೊಂಡಿದ್ದಾರೆ. ಇವರದು ತುಂಬು ಕುಟುಂಬ. ದಾಸೋಹಿಗಳಾದ ಶ್ರೀಮತಿ ಮಹಾದೇವಮ್ಮನವರು ಅನೇಕ ಸಂಘ ಸಂಸ್ಥೆಗಳಿಗೆ ದಾನ ನೀಡಿ, ಪೋಷಕರಾಗಿದ್ದಾರೆ.